ಇನಾಂ ಇಲಾಖಾ.

ಇಸ್ತಿಹಾರ್‌ನಾಮೆ.

(ನಂಬರು 6) ತಾರೀಖು 16ನೇ ಜೂ ಸ್ ೧೮೯೬.

ಇನಾಂದಾರರಿಗೆ ಇದರಿಂದ ತಿಳಿಯಪಡಿಸುವದೇನಂದರೆ,—ಹೊಸಕೊಟೇ ತಾಲ್ಲೂಕಿನಲ್ಲಿ ಇರತಕ್ಕ ಚಿಲ್ಲರೇ ಇನಾಂಗಳ ಬಾಬತು (1300) ಫೈನಲ್ ಟೈಟಲ್ ಡೀಡ್ ಯಾನೆ ಕಾಯಂ ಪಟ್ಟೆಗಳು ಬೆಂಗಳೂರ ಡಿಸ್ಟ್ರಿಕ್ಟ್ ಡೆಪ್ಯುಟಿ ಕಮಿಷನರವರ ಬಳಿಗೆ ಒಟವಾಡೆ ಬಗ್ಗೆ ಈ ತಾರೀಖಿನಲ್ಲಿ ಕಳುಹಿಸಲ್ಪಟ್ಟಿವೆ.

2. ಸದರೀ ತಾಲ್ಲೂಕಿನ ಅಮಲ್‌ದಾರರಿಂದ ಪ್ರತೇಕ ಪ್ರತೇಕ ನೋಟಿಸ್‌ಗಳು ಬಂದ ಮೇಲೆ ಅವುಗಳನ್ನ ತಗದುಕೊಳ್ಳುವ ಬಗ್ಗೆ ಸದರೀ ಇನಾಂದಾರರು ಏರ್ಜ ಪ್ರಕಾರ ಹಾಜರಾಗತಕ್ಕದ್ದು. ಸದರೀ ತಾಲ್ಲೂಕಿನ ಅಮಲ್‌ದಾರ್ರು ಅಂಥಾ ನೋಟಿಸ್‌ಗಳನ್ನು ದೇರ್ ಮಾಡದೆ ಕೊಡತಕ್ಕದ್ದೆಂದು ಇದರಿಂದ ನಿಯಮಿಸಲ್ಪಟ್ಟು ಇರುತ್ತಾರೆ.

3. ಸದರೀ ಚಿಲ್ಲರೇ ಇನಾಂಗಳ ಬಗ್ಗೆ ಈ ಆಫಿಸಿನಿಂದ ಮೊತಲೇ ಕೊಡಲ್ಪಟ್ಟ ಹಂಗಾಮಿ ಪಟ್ಟೆಗಳು ರದ್ದು ಮಾಡಲ್ಪಟ್ಟು ಇರುತ್ತೆಂದು ಇದರ ದೆಸೆ ನಿಂದ ಪ್ರಕಟಿಸಲ್ಪಟ್ಟು ಇರುತ್ತೆ.

ಜೆ. ಪಿ. ಗ್ರಾಂಟ್,
ಸೂಪರ್‌ಟೆಂಡೆಂಟ್ ಆಫ್ ಇನಾಂ ಸೆಟ್ಲ್‌ಮೆಂಟ್.

ನಂದೀದುರ್ಗದ ಡಿವಿಜ್ಞ ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟ್‌ನಲ್ಲಿ.

ಸ್ ೧೮೯೫—೯೬ನೇ ಇಸವಿ ಮಿ|| ಅರ್ಜೀ ನಂಬರ್ 399.

ತುಮಕೂರಲ್ಲಿದ್ದು ಮೃತಪಟ್ಟ ರಂಗರಾಯರ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ರು ಮೇಲ್ಕಂಡ ರಂಗರಾಯರ ಮಗ ವಾಸುದೇವರಾವ್ ಮೈನರ್, ಗಾರ್ಡಿಯರ್ ಮತ್ತು ತಾಯಿ ಕಮಲಾಬಾಯಮ್ಮ, ಮೃತಪಟ್ಟ ಸದರೀ ರಂಗರಾಯರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ತುಮಕೂರು ಸ್ಥಳದ ವಾಸುದೇವರಾವ್ ಮೈನರ್, ಗಾರ್ಡಿಯರ್ ಕಮಲಾಬಾಯಮ್ಮ, ಡಿಟೋ ವಾಸಸ್ಥರಾಗಿ ಮೃತಪಟ್ಟ ರಂಗರಾಯರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ ೧೮೬೦ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಗೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ವಾಸುದೇವರಾವ್ ಮೈನರ್, ಗಾರ್ಡಿಯರ್ ಮತ್ತು ತಾಯಿ ಕಮಲಾಬಾಯಮ್ಮನ ಅರ್ಜಿಯನ್ನು ಸ್ ೧೮೯೬ನೇ ಇಸವಿ ಜುಲೈ ತಿಂಗಳ ತಾರೀಖು 27ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ರಂಗರಾಯರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೯೫—೯೬ನೇ ಇಸವಿ ಮಿ|| ಅರ್ಜೀ ನಂಬರ್ 404.

ಮೃತಪಟ್ಟ ಕೃಷ್ಣಪ್ಪನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ರು ಕೊರ್ಸಪ್ಯಾಟೆಯಲ್ಲಿ ಇರುವ ವೆಂಕಟಸುಬ್ಬಯ್ಯನು, ಮೃತಪಟ್ಟ ಸದರೀ ಚನ್ನಪಟ್ಟಣ ತಾಲ್ಲೂಕು ರವಿನ್ಯೂ ಗುಮಾಸ್ತೆ ಕೆಲಸದಲ್ಲಿದ್ದ ಕೃಷ್ಣಪ್ಪನವರಿಗೆ ತಮ್ಮನು ಆಗಬೇಕೆಂಬ ಹಕ್ಕುದಾರಿ ಮೇಲೆ ಕೊರ್ಸಪೇಟೆ ಸ್ಥಳದ ವೆಂಕಟಸುಬ್ಬಯ್ಯನು, ಡಿಟೋ ವಾಸಸ್ಥರಾಗಿ ಮೃತಪಟ್ಟ ಕೃಷ್ಣಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ ೧೮೬೦ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ವೆಂಕಟಸುಬ್ಬಯ್ಯನವರ ಅರ್ಜಿಯನ್ನು ಸ್ ೧೮೯೬ನೇ ಇಸವಿ ಜುಲೈ ತಿಂಗಳ ತಾರೀಖು 27ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕೃಷ್ಣಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೯೬ನೇ ಇಸವಿ ಜೂ ತಿಂಗಳ 18ನೇ ತಾರೀಖಿನಲ್ಲಿ ಕೋರ್ಟ್ ಮೊಹರಿನ ನಮ್ಮ ದಸ್ತಖತ್ತಿನೆ ಕೊಡೋಣಾಗಿದೆ.

ಟಿ. ಸರಹರಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಬೆಂಗಳೂರು ಡಿಸ್ಟ್ರಿಕ್ಟ್.

ತಾರೀಖು 4ನೇ ಜೂ ಸ್ ೧೮೯೬.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಬೆಂಗಳೂರು ಡಿಸ್ಟ್ರಿಕ್ಟ್ ದೊಡ್ಡಬಳ್ಳಾಪುರದ ತಾಲ್ಲೂಕು ಗ್ರಾಮಾಂತ್ರಗಳಲ್ಲಿರುವ ಕುರಂಗದ ಕಲ್ಲು ದುರ್ಮುಖಿಸಂವತ್ಸರದ ಬಾಬನ್ನು, 1896ನೇ ಇಸವಿ ಜುಲೈ 6ನೇ ತಾರೀಖಿನಲ್ಲಿ ಹರಾಜ್ ಮಾಡಲ್ಪಡುತ್ತೆ.